## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಜೆ.ಬಿ.ಜಗದೀಶ್, ಸಹಾಯಕ ಕಾರ್ಯಪಾಲಕ ಇಂಜಿನೀಯರ್ ಇವರ ಅಮಾನತ್ತನ್ನು ತೆರವುಗೊಳಿಸುವ ಬಗ್ಗೆ.

**ಓದಲಾಗಿದೆ.**

1. ಸರ್ಕಾರದ ಆದೇಶ ಸಂಖ್ಯೆ. ಗ್ರಾಅಪ 16 ಇಎನ್‌ಕ್ಯೂ 2011, ದಿನಾಂಕ. 04-07-2012.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ ಚಿತ್ರದುರ್ಗ ಇವರ ಪತ್ರ ಸಂಖ್ಯೆ. ಜಿ ಪಂ/ಅ(3)/ಸಿಸಿ/ ಸಿಆರ್-07/2012-13, ದಿನಾಂಕ. 16-07-2012.

**ಪ್ರಸ್ತಾವನೆ:**

ಶ್ರೀ ಜೆ.ಬಿ.ಜಗದೀಶ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹೊಸದುರ್ಗ ಇವರು 2009-10ನೇ ಸಾಲಿನ ಆರ್.ಐ.ಡಿ.ಎಫ್. ನಬಾರ್ಡ್ 15ರ ಯೋಜನೆಯಡಿ ರಸ್ತೆ ಅಭಿವೃದ್ಧಿ ಕಾಮಗಾರಿಯನ್ನು Specification ಪ್ರಕಾರ ನಿರ್ವಹಿಸದಿದ್ದರೂ ಗುತ್ತಿಗೆದಾರರಿಗೆ ರೂ. 1,34,476.32 ಗಳನ್ನು ಪಾವತಿಸಿ ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟು ಮಾಡಿದ್ದಾರೆಂಬ ಆರೋಪದ ಮೇರೆಗೆ ಸದರಿಯವರನ್ನು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ: 04-07-2012ರ ಆದೇಶದಲ್ಲಿ ಸೇವೆಯಿಂದ ಅಮಾನತ್ತುಪಡಿಸಲಾಗಿತ್ತು. ಈ ಆದೇಶದ ವಿರುದ್ಧ ಸದರಿಯವರು ಕರ್ನಾಟಕ ಆಡಳಿತ ನ್ಯಾಯ ಮಂಡಳಿಯಲ್ಲಿ ಅರ್ಜಿ ಸಂಖ್ಯೆ. 3539/2012ನ್ನು ಸಲ್ಲಿಸಿ, ಇವರು ಮೇಲಿನಂತೆ ಹಣ ಪಾವತಿಸಿದ ಅವಧಿಯಲ್ಲಿ ಕರ್ತವ್ಯ ನಿರ್ವಹಿಸಿಲ್ಲವೆಂದು ಮತ್ತು ದಿನಾಂಕ. 8-7-2011ರಂದು ಮೇಲ್ಕಂಡ ಹುದ್ದೆಯ ಪ್ರಭಾರ ವಹಿಸಿಕೊಂಡಿರುವುದಾಗಿ ನಿವೇದಿಸಿಕೊಂಡಿರುವುದನ್ನು ಕರ್ನಾಟಕ ಆಡಳಿತ ನ್ಯಾಯ ಮಂಡಳಿಯು ಪರಿಗಣಿಸಿ ದಿನಾಂಕ.4-7-2012ರ ಆದೇಶಕ್ಕೆ 4 ತಿಂಗಳವರೆಗೆ ಅಥವಾ ಮುಂದಿನ ಆದೇಶದವರೆಗೆ ತಡೆಹಿಡಿದಿರುತ್ತದೆ.

ಈ ಮಧ್ಯೆ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿತ್ರದುರ್ಗ ರವರು ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ. 16-07-2012ರ ವರದಿಯಲ್ಲಿ ಮೇಲ್ಕಂಡ ಕಾಮಗಾರಿಗೆ ಹೆಚ್ಚುವರಿ ಹಣ ಪಾವತಿಯನ್ನು ಶ್ರೀ ಡಿ.ವಿ.ಆನಂದಯ್ಯ ಇವರ ಅವಧಿಯಲ್ಲಿ ಮಾಡಿದ್ದು, ಈ ಪ್ರಕರಣ ಶ್ರೀ ಜೆ.ಬಿ.ಜಗದೀಶ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರಿಗೆ ಸಂಬಂಧವಿಲ್ಲವೆಂದು ವರದಿ ಮಾಡಿದ್ದು, ಹಣ ಪಾವತಿಗೆ ಶ್ರೀ ಜೆ.ಬಿ.ಜಗದೀಶ್ ರವರು ಕಾರಣರಾಗಿರುವುದಿಲ್ಲವೆಂದು ತಿಳಿಸಿ, ಅವರ ಅಮಾನತ್ತು ಆದೇಶವನ್ನು ರದ್ದುಪಡಿಸುವಂತೆ ಕೋರಿದ್ದಾರೆ.

ಪ್ರಕರಣವನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ ಮುಂದಿನಂತೆ ಆದೇಶಿಸಿದೆ.

**ಆದೇಶ ಸಂಖ್ಯೆ. ಗ್ರಾಅಪ 16 ಇಎನ್‌ಕ್ಯೂ 2012, ಬೆಂಗಳೂರು,**

**ದಿನಾಂಕ.10-10-2012**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಶ್ರೀ ಜೆ.ಬಿ.ಜಗದೀಶ್, ಸಹಾಯಕ ಕಾರ್ಯಪಾಲಕ

----2

ಇಂಜಿನಿಯರ್ ಇವರ ಅಮಾನತ್ತನ್ನು ತೆರವುಗೊಳಿಸಿ, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹೊಸದುರ್ಗ ಹುದ್ದೆಯಲ್ಲಿ ಮುಂದುವರೆಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್.ವೈ.ಸಾಗರ), 10/10/12
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 & 2) / (ಆಡಿಟ್)
2. ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, ವಿಕಾಸ ಸೌಧ, ಬೆಂಗಳೂರು.
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ರಿಸಾಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು,
4. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕೆ.ಆರ್.ಆರ್.ಡಿ.ಎ., ರಾಜಕುಮಾರ್ ರಸ್ತೆ, ರಾಜಾಜಿನಗರ 1ನೇ ಬ್ಲಾಕ್, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿತ್ರದುರ್ಗ.
6. ಶ್ರೀ ಜೆ.ಬಿ.ಜಗದೀಶ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರಿಗೆ – ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿತ್ರದುರ್ಗ ಇವರ ಮುಖಾಂತರ.
7. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ (ಸೇವೆಗಳು-ಎ / ಸೇವೆಗಳು-ಸಿ).
8. ಮಾನ್ಯ ಉಪ ಮುಖ್ಯ ಮಂತ್ರಿಗಳ ಆಪ್ತ ಕಾರ್ಯದರ್ಶಿಯವರಿಗೆ.
9. ಗ್ರಾ.ಅ.ಪಂ.ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್/ ಉಪ ಕಾರ್ಯದರ್ಶಿ ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
10. ರಕ್ಷಾ ಕಡತ / ಮೇಲ್ವಿಚಾರಕರು, ಗಣಕಯಂತ್ರ ಕೋಶ ವಿಭಾಗ, / ಹೆಚ್ಚುವರಿ ಪ್ರತಿಗಳು.